# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **778** |
| ಸದಸ್ಯರ ಹೆಸರು | : | ಡಾ: ಯತೀಂದ್ರ ಎಸ್.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 18-08-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಾದ್ಯಂತ ಗ್ರಾಮ ಠಾಣಾ ವ್ಯಾಪ್ತಿಯ ಅಕ್ಕಪಕ್ಕದಲ್ಲಿನ ಜಮೀನುಗಳಲ್ಲಿ ನಿರ್ಮಿಸಿರುವ ಮನೆಗಳಿಗೆ ವಿದ್ಯುತ್ ಸಂಪರ್ಕವಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸದರಿ ಈ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು) | ಸರ್ವೋಚ್ಚ ನ್ಯಾಯಾಲಯವು ವಿದ್ಯುತ್ ಸಂಪರ್ಕ ನೀಡುವ ಮುನ್ನ ವಿದ್ಯುತ್ ಸರಬರಾಜು ಕಂಪನಿಗಳು, ಸದರಿ ಕಟ್ಟಡಗಳ ಮಾಲೀಕರು ಒಸಿ (Occupancy Certificate) ಮತ್ತು ಸಿಸಿ (Completion Certificate) ಹಾಜರುಪಡಿಸಿದ ನಂತರವೇ ವಿದ್ಯುತ್ ಸಂಪರ್ಕ ನೀಡುವಂತೆ ಆದೇಶಿಸಿರುತ್ತದೆ. ಸದರಿ ಆದೇಶವು ಹಾಲಿ ಬಾಕಿ ಇರುವ ಎಲ್ಲಾ ಅರ್ಜಿಗಳಿಗೆ ಅನ್ವಯವಾಗುವುದರಿಂದ ಒಸಿ ಮತ್ತು ಸಿಸಿ ಹಾಜರು ಪಡಿಸಿರುವ ಎಲ್ಲಾ ಪ್ರಕರಣಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಸದರಿ ಆದೇಶವು ಎಲ್ಲಾ ವಿಧದ ನಿವೇಶನಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ಅನ್ವಯಿಸುತ್ತದೆ. |

ಸಂಖ್ಯೆ: ಎನರ್ಜಿ 184 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು